# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಮಗಳೂರು ಜಿಲ್ಲೆ ಕಡೂರು ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ. ನಅಇ 61 ಮೈಅಪ್ರಾ 2003, ದಿನಾಂಕ: 7.4.03.

2) ಮುಖ್ಯಾಧಿಕಾರಿ, ಪುರಸಭೆ, ಕಡೂರು ಇವರ ಪತ್ರ ಸಂಖ್ಯೆ. ಕ.ಪು.ಮ.ಯೋ.78/07-08, ದಿನಾಂಕ: 27.6.08.

3) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ.ನಯೋ(27):ಕಡೂರು:ಮ.ಯೋ.ಅಂ:2017:2009 ದಿನಾಂಕ: 24.3.09 ರಲ್ಲಿ ನೀಡಿರುವ ಅಭಿಪ್ರಾಯ.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಚಿಕ್ಕಮಗಳೂರು ಜಿಲ್ಲೆ ಕಡೂರು ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಕಡೂರು ಪುರಸಭೆ ಕಾರ್ಯಾಲಯವು ಕಡೂರು ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಮುಖಾಂತರ ಸಲ್ಲಿಸಲಾಗಿದೆ.

ಮೇಲೆ ಓದಲಾದ (3) ರ ನಗರ ಯೋಜನಾ ನಿರ್ದೇಶಕರ ಕಡತದಲ್ಲಿ ಕಡೂರು ಪಟ್ಟಣದ ಜನಸಂಖ್ಯೆಯು 2021 ರಲ್ಲಿ 50,000 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಕಡೂರು ಸ್ಥಳೀಯ ಯೋಜನಾ ಪ್ರದೇಶದ 384.21 ಹೆಕ್ಟೇರ್‌ಗಳಲ್ಲಿ 381.52 ಹೆಕ್ಟೇರ್‌ಗಳನ್ನು ಅಭಿವೃದ್ಧಿಗಾಗಿ ಬೇಕಾಗುವ ಪ್ರದೇಶವೆಂದು ತೀರ್ಮಾನಿಸಿ ಮಹಾ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಒಟ್ಟು 381.52 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 188.53 ಹೆಕ್ಟೇರ್ (ಶೇ.49.42), ವಾಣಿಜ್ಯಕ್ಕಾಗಿ 26.71 ಹೆಕ್ಟೇರ್ (ಶೇ.7.00), ಕೈಗಾರಿಕೆಗಾಗಿ 19.92 ಹೆಕ್ಟೇರ್ (ಶೇ.5.22), ಸಾರ್ವಜನಿಕ: ಅರೆ ಸಾರ್ವಜನಿಕಕ್ಕಾಗಿ 32.95 ಹೆಕ್ಟೇರ್ (ಶೇ.8.64), ನಾಗರೀಕ ಸೌಲಭ್ಯಕ್ಕೆ 0.85 ಹೆಕ್ಟೇರ್ (ಶೇ.0.22), ಉದ್ಯಾನವನ ಮತ್ತು ಬಯಲು ಜಾಗೆಗಾಗಿ 28.97 ಹೆಕ್ಟೇರ್ (ಶೇ.7.53), ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 83.59 ಹೆಕ್ಟೇರ್ (ಶೇ.21.91) ಪ್ರದೇಶವನ್ನು ನಿಗಧಿಪಡಿಸಿ ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು

ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ನಂತರ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ. ನಅಇ 206 ಮೈಅಪ್ರಾ 2009, ಬೆಂಗಳೂರು, ದಿನಾಂಕ: 22.6.2009.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಜಿಲ್ಲೆ, ಕಡೂರು ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೨. ಮುಖ್ಯಾಧಿಕಾರಿ, ಪುರಸಭೆ ಕಾರ್ಯಾಲಯ, ಕಡೂರು.
೩. ನಗರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಮೈಸೂರು.
೪. ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಚಿಕ್ಕಮಗಳೂರು.
೫. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
೬. ಕರ್ನಾಟಕ ರಾಜ್ಯಪತ್ರ.
೭. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.

168
25/6/09